ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗದಗ ಜಿಲ್ಲೆಯ ಶಿರಹಟ್ಟಿ ಮತ್ತು ಮುಂಡರಗಿ ತಾಲ್ಲೂಕಿನಡಿ ಬರುವ 29 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನು ತುಂಬಿಸುವ ಜಾಲವಾಡಗಿ ಏತ ನೀರಾವರಿ ಯೋಜನೆಯ ರೂ.197.50 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ: ಕನೀನಿ/ ತಾಂತ್ರಿಕ/ ಜಾಲಪಾಡಗಿ ಏನೀಯೋ (ಭಾಗ-3)/ 2017-18/ 2070, ದಿನಾಂಕ:31.07.2021. ಮತ್ತು ಪತ್ರ ಸಂಖ್ಯೆ: 3324, ದಿನಾಂಕ:23.09.2021.

****

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ ಗದಗ ಜಿಲ್ಲೆಯ ಶಿರಹಟ್ಟಿ ಮತ್ತು ಮುಂಡರಗಿ ತಾಲ್ಲೂಕಿನಡಿ ಬರುವ ಹಮ್ಮಿಗಿ, ಕಟ್ಟೆಬಸವಣ್ಣ, ಮುರುಡಿ, ಕೇಲೂರು, ಚಿಕ್ಕವಡ್ಡಟ್ಟಿ-2, ಕಡಕೋಳ್, ಜಲ್ಲಿಗೇರಿ, ಅತ್ತಿಕಟ್ಟಿ, ಹೊಸಹಳ್ಳಿ, ಮಾಗಡಿ ಗ್ರಾಮಗಳ ಹಾಗೂ ಇತರೆ ಗ್ರಾಮಗಳ ಒಟ್ಟು 29 ಕೆರೆಗಳಲ್ಲಿ ಮಳೆಯ ಅಭಾವದಿಂದ ನೀರಿನ ಸಂಗ್ರಹಣೆಯಾಗದೆ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗಿರುತ್ತದೆ. ಆದ್ದರಿಂದ, ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಹಾಗೂ ಅಂತರ್ಜಲ ಮಟ್ಟ ವೃದ್ಧಿಸಲು, ಜಾಲವಾಡಗಿ ಏತ ನೀರಾವರಿ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ತಿಳಿಸಿರುತ್ತಾರೆ.

ಮುಂದುವರೆದು, ಜಾಲವಾಡಗಿ ಏತ ನೀರಾವರಿ ಯೋಜನೆಯ ರೂ. 197.50 ಕೋಟಿಗಳ ವಿವರವಾದ ಯೋಜನಾ ವರದಿಯನ್ನು ದಿನಾಂಕ:05.01.2021 ರಂದು ಜರುಗಿದ ನಿಗಮದ 76ನೇ ಅಂದಾಜು ಪರಿಶೀಲನಾ ಸಮಿತಿ ಸಭೆಯಲ್ಲಿ ಮಂಡಿಸಲಾಗಿದ್ದು, ಸದರಿ ಪ್ರಸ್ತಾವನೆಗೆ ಸಮಿತಿಯು ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ ಹಾಗೂ ದಿನಾಂಕ:23.07.2021 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 96ನೇ ಸಭೆಯಲ್ಲಿ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಚರ್ಚೆಯ ನಂತರ ಮಂಡಳಿಯು ಸದರಿ ಯೋಜನೆಯ ರೂ.197.50 ಕೋಟಿ ಮೊತ್ತದ ಯೋಜನಾ ವರದಿಗೆ ಅನುಮೋದನೆ ನೀಡಿ, ಇದಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಶಿಫಾರಸ್ಸು ಮಾಡಿರುತ್ತದೆ ಎಂದು ತಿಳಿಸಿ, ಸದರಿ ಜಾಲವಾಡಗಿ ಏತ ನೀರಾವರಿ ಯೋಜನೆಯ ವಿವರವಾದ ರೂ.197.50 ಕೋಟಿ ಮೊತ್ತದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಜಸಂಇ 57 ಎಂಟಿಪಿ 2020,
ಬೆಂಗಳೂರು, ದಿನಾಂಕ: 25.03.2022.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಗದಗ ಜಿಲ್ಲೆಯ ಶಿರಹಟ್ಟಿ ಮತ್ತು ಮುಂಡರಗಿ ತಾಲ್ಲೂಕಿನಡಿ ಬರುವ 29 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನು ತುಂಬಿಸುವ ಜಾಲವಾಡಗಿ ಏತ ನೀರಾವರಿ ಯೋಜನೆಯ ರೂ. 197.50 ಕೋಟಿ (ರೂ. ಒಂದು ನೂರ ತೊಂಭತ್ತೇಳು ಕೋಟಿ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 129 ಆಕೋ-1/2020 (ಇ-ಆಫೀಸ್) ದಿನಾಂಕ:08.02.2022 ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 26 ಎಂಸಿಎಂ 2021:ಪಿಪಿಡಿ, ದಿನಾಂಕ: 04.10.2021 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Shubha K 25/03/2022

(ಶುಭಾ ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಜಲಸಂಪನ್ಮೂಲ ಇಲಾಖೆ, (ತಾಂತ್ರಿಕ-1).

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು.
4. ಸರ್ಕಾರದ ಉಪಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ) ವಿಧಾನಸೌಧ. (ಸಚಿವ ಸಂಪುಟ ಪ್ರಕರಣ ಸಂಖ್ಯೆ:ಸಿ:122/2022, ದಿನಾಂಕ: 11.03.2022 ರ ಮೇರೆಗೆ)
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ನೀರಾವರಿ ಕೇಂದ್ರ ವಲಯ, ಮುನಿರಾಬಾದ್.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ.
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
11. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜ.ಸಂ. ಇಲಾಖೆ.
13. ತಾಂತ್ರಿಕ ಸಹಾಯಕರು, (ತಾಂತ್ರಿಕ-6) ಜಲ ಸಂಪನ್ಮೂಲ ಇಲಾಖೆ.
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.